ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:  ದಿನಾಂಕ : DATE : 27/10/17

# 344 ಕುಟುಂಬಗಳಿಗೆ ಪರಿಹಾರ

## ದತ್ತಾತ್ರೇಯ ಬಡಾವಣೆ 304, ಕುಮಾರಸ್ವಾಮಿ ಲೇಔಟ್ 40 ಕುಟುಂಬಕ್ಕೆ ಚೆಕ್ ವಿತರಣೆ

ಬೆಂಗಳೂರು: ಹೊಸಕೆರೆಹಳ್ಳಿ ವಾರ್ಡ್‌ನ ದತ್ತಾತ್ರೇಯ ನಗರ ವ್ಯಾಪ್ತಿಯಲ್ಲಿ ಇತ್ತೀಚೆಗೆ ಸುರಿದ ಧಾರಾಕಾರ ಮಳೆಯಿಂದ ಹೆಚ್ಚು ಹಾನಿಯಾಗಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಯವರ ನಿರ್ದೇಶನದ ಮೇರೆಗೆ ಸಂಕಷ್ಟಕ್ಕೆ ಒಳಗಾದ ಕುಟುಂಬಗಳಿಗೆ ತಲಾ 25 ಸಾವಿರ ರೂ. ಪರಿಹಾರ ವಿತರಿಸಲಾಗಿದೆ ಎಂದು ಕಂದಾಯ ಸಚಿವ ಆರ್. ಅಶೋಕ್ ತಿಳಿಸಿದರು.



ಹೊಸಕೆರೆಹಳ್ಳಿ ವಾರ್ಡ್‌ನ ದತ್ತಾತ್ರೇಯ ನಗರ ವ್ಯಾಪ್ತಿಯಲ್ಲಿ ಹಾನಿಯಾಗಿರುವ 344 ಕುಟುಂಬಗಳಿಗೆ ತಲಾ 25 ಸಾವಿರ ರೂ. ಪರಿಹಾರ ಚೆಕ್ ಹಸ್ತಾಂತರಿಸಿ ಮಾತನಾಡಿದ ಅವರು, ಈ ಭಾಗದಲ್ಲಿ ಕೆಲವು ಮನೆಗಳಿಗೆ ಭಾರೀ ಹಾನಿಯಾಗಿದೆ. ಇನ್ನು ಕೆಲವು ಮನೆಗಳಿಗೆ ಅಷ್ಟೇನು ಹಾನಿಯಾಗಿಲ್ಲ, ಎಲ್ಲ ಅರ್ಹರಿಗೂ ಸಮಾನವಾಗಿ ಪರಿಹಾರ ನೀಡಲಾಗಿದೆ. ದತ್ತಾತ್ರೇಯ ಬಡಾವಣೆಯಲ್ಲಿ 304 ಕುಟುಂಬಗಳಿಗೆ ಹಾಗೂ ಕುಮಾರಸ್ವಾಮಿ ಬಡಾವಣೆ ವ್ಯಾಪ್ತಿಯಲ್ಲಿ 40 ಕುಟುಂಬಗಳಿಗೆ ತಲಾ 25 ಸಾವಿರ ರೂ. ಸೇರಿದಂತೆ ಒಟ್ಟು 344 ಕುಟುಂಬಗಳಿಗೆ ತಲಾ 25 ಸಾವಿರದಂತೆ ಒಟ್ಟು 86 ಲಕ್ಷ ರೂ. ಪರಿಹಾರ ವಿತರಿಸಲಾಗಿದೆ ಎಂದು ಹೇಳಿದರು.

ಇದೇ ರೀತಿ ಬೆಂಗಳೂರು ದಕ್ಷಿಣ, ಬೊಮ್ಮನಹಳ್ಳಿ ಸೇರಿದಂತೆ ವಿವಿಧೆಡೆ ಮಳೆಯಿಂದ ಸಂಕಷ್ಟಕ್ಕೆ ಸಿಲುಕಿರುವ (ಮನೆ ಹಾಳಾಗಿರುವ ಕುಟುಂಬಕ್ಕೆ) ಪರಿಹಾರ ನೀಡಲಾಗುತ್ತಿದೆ. ಅಲ್ಲದೆ, ಮಳೆಯಿಂದ ಸಣ್ಣ ಪ್ರಮಾಣದಲ್ಲಿ ಹಾನಿಗೆ ಒಳಗಾದ ಕುಟುಂಬಗಳಿಗೆ ತಲಾ 10 ಸಾವಿರ ರೂ. ಪರಿಹಾರ ನೀಡಲು ನಿರ್ಧರಿಸಲಾಗಿದ್ದು ಈ ಸಂಬಂಧ ಮಳೆಯಿಂದ ಹಾನಿಗೆ ಒಳಗಾದ ಮನೆಗಳ ಸಮೀಕ್ಷೆ ನಡೆಸಿ ಪಟ್ಟಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ನೆಲ ಮಹಡಿಯಲ್ಲಿ ನೆಲೆಸಿದ್ದು, ಮಳೆಯಿಂದ ಹಾನಿಯಾದ ಮನೆಗಳಲ್ಲಿ ನೆಲೆಸಿರುವ ಕುಟುಂಬದವರಿಗೆ ಮಾತ್ರ ಪರಿಹಾರ ನೀಡಲಾಗುತ್ತಿದೆ. ಮೊದಲನೇ ಮತ್ತು ಎರಡನೇ ಮಹಡಿಯಲ್ಲಿ ವಾಸವಿರುವವರಿಗೆ ನಿಯಮಾನುಸಾರ ಪರಿಹಾರ ನೀಡಲು ಬರುವುದಿಲ್ಲ. ಮಳೆ ಅನಾಹುತ ಆದ ಪ್ರದೇಶದ ಪ್ರತಿ ರಸ್ತೆಯಲ್ಲೂ ಮನೆಗಳ ಸಮೀಕ್ಷೆ ಮಾಡಿ ಪಟ್ಟಿ ಸಿದ್ಧಪಡಿಸಲಾಗಿದೆ ಎಂದರು.

### ಆಡಳಿತಾಧಿಕಾರಿ ಗೌರವ್ ಗುಪ್ತ ಪರಿಶೀಲನೆ

ದತ್ತಾತ್ರೇಯ ಬಡಾವಣೆ ವ್ಯಾಪ್ತಿಯಲ್ಲಿನ ರಾಜಕಾಲುವೆ ಭಾಗದಲ್ಲಿ ರಾಜಕಾಲುವೆ ಮಾರ್ಗ ಕಿರಿದಾಗಿರುವುದು ಹಾಗೂ ರಾಜಕಾಲುವೆ ಮಾರ್ಗದ ಪೈಪ್ ಲೈನ್ ವ್ಯವಸ್ಥೆ ಸಮರ್ಪಕವಾಗಿ ಇಲ್ಲದೆ ಇರುವುದರಿಂದ ಸಮಸ್ಯೆ ಸೃಷ್ಟಿಯಾಗುತ್ತಿದ್ದು, ಇದನ್ನು ಸರಿಪಡಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಗೌರವ್ ಗುಪ್ತಾ ತಿಳಿಸಿದರು. ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಿದರೆ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗುವುದು ತಪ್ಪಲಿದೆ. ಅಲ್ಲದೆ, ರಾಜಕಾಲುವೆ ತಡೆಗೋಡೆ ಬಿದ್ದಿರುವ ಭಾಗದಲ್ಲಿ ಮರಳು ಮೂಟೆಗಳನ್ನು ಹಾಕಲಾಗಿದ್ದು, ಶಾಶ್ವತವಾಗಿ ಕಾಂಕ್ರೀಟ್ ಗೋಡೆ ನಿರ್ಮಿಸಲು ಸೂಚಿಸಲಾಗಿದೆ. ರಾಜಕಾಲುವೆಗೆ ಹೊಂದಿಕೊಂಡಿರುವ ಹಾಗೂ ಸಮೀಪದಲ್ಲಿರುವ ಮನೆಗಳ ಅಡಿಪಾಯ ಮತ್ತು ಕಟ್ಟಡದಲ್ಲಿ ಜನ ವಾಸಿಸಲು ಯೋಗ್ಯವಾಗಿದೆಯೇ ಎಂಬುದನ್ನು ಖುದ್ದಾಗಿ ಪರಿಶೀಲಿಸಿ ಕ್ರಮಕ್ಕೆ ನಿರ್ದೇಶಿಸಲಾಗಿದೆ ಎಂದು ತಿಳಿಸಿದರು.

### ಹಂತ- ಹಂತವಾಗಿ ಬದಲಾವಣೆ

ಹೊಸಕೆರೆಹಳ್ಳಿ ವಾರ್ಡ್‌ನ ದತ್ತಾತ್ರೇಯ ಬಡಾವಣೆ ಪ್ರದೇಶದಲ್ಲಿನ ರಾಜಕಾಲುವೆ ಮಾರ್ಗದಲ್ಲಿ ಕೆಲವು ಅವೈಜ್ಞಾನಿಕ ನಾಲೆಗಳು ನಿರ್ಮಾಣವಾಗಿದ್ದು ಎಂದು ಬಿಬಿಎಂಪಿ ರಾಜಕಾಲುವೆ ಮುಖ್ಯ ಎಂಜಿನಿಯರ್ ಪ್ರಹ್ಲಾದ್ ಬಿ.ಎನ್. ತಿಳಿಸಿದರು. ಈ ಭಾಗದಲ್ಲಿ ನೀರು ಸರಾಗವಾಗಿ ಹರಿದು ಹೋಗುವುದಕ್ಕೆ ಕೆಲವು ಅಡಚಣೆಗಳಿದ್ದು, ಕಿರಿದಾದ ರಾಜಕಾಲುವೆ ಮಾರ್ಗ ಅಗಲ ಹೆಚ್ಚಿಸುವುದರಿಂದ ನೀರು ಸರಾಗವಾಗಿ ಹರಿದು ಹೋಗಲು ಸಾಧ್ಯವಾಗಲಿದೆ. ಕೊಳಚೆ ನೀರು ಹರಿದು ಹೋಗುವ ಮಾರ್ಗವೂ ಅವೈಜ್ಞಾನಿಕವೂ, ಕಿರಿದಾಗಿಯೂ ಇದೆ. ಇವೆಲ್ಲವನ್ನೂ ಹಂತ-ಹಂತವಾಗಿ ಶೀಘ್ರ ಸರಿಪಡಿಸುತ್ತೇವೆ ಎಂದು ಹೇಳಿದರು.

### ಪರಿಹಾರ ಪಡೆದವರಲ್ಲಿ ಒತ್ತುವರಿದಾರರು?

ಸರ್ಕಾರ- ಪಾಲಿಕೆ ನೀಡಿದ ಪರಿಹಾರ ತೆಗೆದುಕೊಂಡವರಲ್ಲಿ ರಾಜಕಾಲುವೆ ಒತ್ತುವರಿ ಮಾಡಿದವರೂ ಇದ್ದಾರೆ ಎಂಬ ಆರೋಪ ಕೇಳಿಬಂದಿದೆ. ಪರಿಹಾರ ಪಡೆದವರ ಪೈಕಿ ಅಂದಾಜು 100ರಿಂದ 120ಕ್ಕೂ ಹೆಚ್ಚು ಮನೆಗಳು ರಾಜಕಾಲುವೆ ಒತ್ತುವರಿ ಮಾಡಿಕೊಂಡಿರುವ ಸಾಧ್ಯತೆ ಇದೆ ಎಂದು ಪಾಲಿಕೆಯ ಅಧಿಕಾರಿಗಳು ಅಂದಾಜಿಸಿದ್ದಾರೆ. ಒತ್ತುವರಿ ಮಾಡಿಕೊಂಡಿರುವವರಿಗೂ ತಾತ್ಕಾಲಿಕವಾಗಿ ಸರ್ಕಾರ ಪರಿಹಾರ ನೀಡಿದ್ದು, ಒತ್ತುವರಿ ತೆರವು ಕಾರ್ಯಾಚರಣೆ ವೇಳೆ ಯಾವುದೇ ಮುಲಾಜಿಲ್ಲದೆ ಕ್ರಮ ವಹಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ರಾಜಕಾಲುವೆ ಒತ್ತುವರಿ ಮಾಡುವುದಕ್ಕೆ ಕ್ರಮ:** ನಗರದಲ್ಲಿ ರಾಜಕಾಲುವೆ ಒತ್ತುವರಿ ಮಾಡಿಕೊಂಡಿರುವ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ನಗರದ ಯಾವುದೇ ಭಾಗದಲ್ಲಿ ರಾಜಕಾಲುವೆ ಒತ್ತುವರಿ ಮಾಡಿಕೊಳ್ಳದಂತೆ ಕಟ್ಟುನಿಟ್ಟಿನ ಕ್ರಮ ವಹಿಸಲಾಗುವುದು. ಇನ್ನು ಕಳೆದ 8ರಿಂದ 9 ತಿಂಗಳ ಅಂತರದಲ್ಲಿ ಒತ್ತುವರಿ ಆಗಿರುವ ಪ್ರದೇಶವನ್ನು ಶೀಘ್ರ ಗುರುತಿಸಿ, ಒತ್ತುವರಿ ಆಗಿರುವ ಸ್ಥಳಗಳಲ್ಲಿ ತೆರವುಗೊಳಿಸುವ ಕಾರ್ಯಾಚರಣೆ ಪ್ರಾರಂಭಿಸಲಾಗುವುದು. ರಾಜಕಾಲುವೆ ಒತ್ತುವರಿ ಆಗಿರುವ ಬಗ್ಗೆ ಸಾರ್ವಜನಿಕರೂ ಸಹಕಾರ ನೀಡಬೇಕು. ಒತ್ತುವರಿ ಆಗಿರುವ ಬಗ್ಗೆ ಸಾರ್ವಜನಿಕರೂ ಮಾಹಿತಿ ನೀಡಿದರೆ, ಶೀಘ್ರ ಕ್ರಮಕೈಗೊಳ್ಳಲು ಸಹಕಾರಿಯಾಗಲಿದೆ ಎಂದರು.

ಪಾಲಿಕೆ ಆಡಳಿತಾಧಿಕಾರಿ ಗೌರವ್ ಗುಪ್ತ, ಬಿಬಿಎಂಪಿ ವಿಶೇಷ ಆಯುಕ್ತ(ಕಂದಾಯ) ಬಸವರಾಜು, ದಕ್ಷಿಣ ವಲಯ ಜಂಟಿ ಆಯುಕ್ತ ವೀರಭದ್ರ ಸ್ವಾಮಿ ಹಾಗೂ ದಕ್ಷಿಣ ವಲಯ ಉಪ ಆಯುಕ್ತೆ ಲಕ್ಷ್ಮೀದೇವಿ ಇತರರಿದ್ದರು.